ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

993(1086) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಕೈಗಾರಿಕಾ ಪ್ರದೇಶವನ್ನು ಅಳವಡಿಸಿ ಹಂಚಿಕೆ ಮಾಡುವಂತೆ ಕೋರಿದ ಕಂಪನಿಗಳೆಷ್ಟು ಮತ್ತು ಅವು ಯಾವುವು ;

(ಆ) ಕೈಗಾರಿಕಾ ಉದ್ದೇಶಕ್ಕಾಗಿ ಸರ್ಕಾರವು ಎಲ್ಲೆಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆ ;

(ಇ) ಸ್ವಾಧೀನಪಡಿಸಿಕೊಂಡ ಭೂಮಿಗೆ ಸರ್ಕಾರ ನಿಗದಿಪಡಿಸಿದ ಮಾನದಂಡ, ನಿಗದಿ, ಹಂಚಿಕೆ ಮತ್ತು ಕ್ರಮಗಳೇನು ;

(ಈ) ಹಂಚಿಕೆ ಪಡೆದ ಕಂಪನಿಗಳು ಕಾರ್ಯಾರಂಭ ಮಾಡಿರುತ್ತವೆಯೇ; ಮಾಡಿದ್ದಲ್ಲಿ, ಸ್ಥಳೀಯ ಕೆಲಸಗಾರರನ್ನು ನೇಮಿಸಿಕೊಳ್ಳಲಾಗಿದೆಯೇ; ಇಲ್ಲದಿದ್ದಲ್ಲಿ, ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ ?